# ತುಮಕೂರು ವಿಶ್ವವಿದ್ಯಾನಿಲಯ

ವಿಶ್ವವಿದ್ಯಾನಿಲಯ ಕಾರ್ಯಾಲಯ, ಬಿ. ಹೆಚ್. ರಸ್ತೆ, ತುಮಕೂರು-572 103

ದಿನಾಂಕ:19.06.2025

ಸಂಖ್ಯೆ: ತುವಿ:ಡಿಇವಿ-02:2025-26/657

**:ಸುತ್ತೋಲೆ:**

ವಿಷಯ: ಕಾನೂನು ಅರಿವು ಕಾರ್ಯಕ್ರಮಗಳನ್ನು ಆಯೋಜಿಸುವ ಕುರಿತು.

ಉಲ್ಲೇಖ:1. ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರ ಪತ್ರ ಸಂಖ್ಯೆ:ಕರಾಮಾ/ಅಆಶಾ/275/2025-26/44/9 ದಿನಾಂಕ:28.05.2025

2. ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು ಇವರ ಪತ್ರ ಸಂಖ್ಯೆ:ಕರಾಉಶಪ/ಇತರೆ/02/2025-26/383 ದಿನಾಂಕ:05.06.2025
3. ಮಾನ್ಯ ಕುಲಪತಿಯವರ ಅನುಮೋದನೆ ದಿನಾಂಕ:18.06.2025 (ಕಂಡಿಕೆ-05)

*****

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಹಿಳಾ ಆಯೋಗದ ಅಧ್ಯಕ್ಷರು ಬರೆದಿರುವ ಉಲ್ಲೇಖ (01)ರ ಪತ್ರದಲ್ಲಿ ಮಹಿಳೆಯರ ಸಾಂವಿಧಾನಿಕ ಹಕ್ಕುಗಳನ್ನು ಎತ್ತಿ ಹಿಡಿಯುವ ನಿಟ್ಟಿನಲ್ಲಿ ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ವಿಶ್ವವಿದ್ಯಾಲಯಗಳು ಮತ್ತು ಅವುಗಳ ಘಟಕ ಕಾಲೇಜುಗಳು ಹಾಗೂ ಸಂಯೋಜಿತ ಕಾಲೇಜುಗಳಲ್ಲಿ ವಿದ್ಯಾರ್ಥಿನಿಯರು ಹಾಗೂ ಮಹಿಳಾ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಸುರಕ್ಷತೆ ಮತ್ತು ಬದ್ಧತೆಯ ಸಲುವಾಗಿ ಜಾಗೃತಿ ಮೂಡಲು ಕಾನೂನು ಅರಿವು ಕಾರ್ಯಕ್ರಮವನ್ನು ಕಡ್ಡಾಯವಾಗಿ ಹಮ್ಮಿಕೊಳ್ಳುವಂತೆ ಸೂಚಿಸಿರುತ್ತಾರೆ. ಈ ಹಿನ್ನೆಲೆಯಲ್ಲಿ ರಾಜ್ಯದ ಖಾಸಗಿ ವಿಶ್ವವಿದ್ಯಾಲಯಗಳು ಹಾಗೂ ಸರ್ಕಾರಿ ವಿಶ್ವವಿದ್ಯಾಲಯಗಳು ತಮ್ಮ ಅಧೀನದಲ್ಲಿ ಬರುವ ಘಟಕ ಕಾಲೇಜುಗಳು ಹಾಗೂ ಸಂಯೋಜಿತ ಕಾಲೇಜುಗಳಲ್ಲಿ ಕಾನೂನು ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲು ಅಗತ್ಯ ಕ್ರಮ ಕೈಗೊಳ್ಳುವಂತೆ ಸೂಚಿಸಿ ಇದನ್ನು ಅತ್ಯಂತ ಜರೂರು ಎಂದು ಪರಿಗಣಿಸುವುದೆಂದು ಉಲ್ಲೇಖ(02)ರ ಕಾರ್ಯನಿರ್ವಾಹಕ ನಿರ್ದೇಶಕರು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು ಪರಿಷತ್ ಇವರ ಪತ್ರದಲ್ಲಿ ತಿಳಿಸಿರುತ್ತಾರೆ.

ಈ ಸಂಬಂಧ ಉಲ್ಲೇಖ(01 ಮತ್ತು 02)ರ ಆದೇಶಗಳಂತೆ ತಮ್ಮ ಕಾಲೇಜು/ವಿಭಾಗಗಳಲ್ಲಿ ಮಹಿಳಾ ಸಿಬ್ಬಂದಿಗಳ ಸುರಕ್ಷತೆ ಮತ್ತು ಬದ್ಧತೆಯ ಸಲುವಾಗಿ ಜಾಗೃತಿ ಮೂಡಲು ಕಾನೂನು ಅರಿವು ಕಾರ್ಯಕ್ರಮವನ್ನು ಕಡ್ಡಾಯವಾಗಿ ಹಮ್ಮಿಕೊಳ್ಳಲು ಅಗತ್ಯ ಕ್ರಮವಹಿಸುವಂತೆ ಈ ಮೂಲಕ ತಿಳಿಸಲಾಗಿದೆ.

ಆದೇಶದ ಮೇರೆಗೆ

ಉಪಕುಲಸಚಿವರು

ಅಭಿವೃದ್ಧಿ ವಿಭಾಗ

ತುಮಕೂರು ವಿಶ್ವವಿದ್ಯಾನಿಲಯ

ತುಮಕೂರು

ಕರಡು ಮಾನ್ಯ ಕುಲಸಚಿವರಿಂದ ಅನುಮೋದಿಸಲ್ಪಟ್ಟಿದೆ.

ಗೆ,

1. ಅಧ್ಯಕ್ಷರು/ಸಂಯೋಜಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಅಧ್ಯಕ್ಷರು/ಸಂಯೋಜಕರು ಸ್ನಾತಕೋತ್ತರ ವಿಜ್ಞಾನ ವಿಭಾಗಗಳು,"ಜ್ಞಾನಸಿರಿ ಕ್ಯಾಂಪಸ್" ಬಿದರಕಟ್ಟೆ, ಹೆಬ್ಬೂರು ಹೋಬಳಿ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಸಂಯೋಜಕರು, "ಜ್ಞಾನಸಿರಿ ಕ್ಯಾಂಪಸ್" ಬಿದರಕಟ್ಟೆ, ಹೆಬ್ಬೂರು ಹೋಬಳಿ, ತುಮಕೂರು.
4. ಪ್ರಾಂಶುಪಾಲರು, ವಿಶ್ವವಿದ್ಯಾನಿಲಯ ಘಟಕ/ಸಂಯೋಜಿತ ಕಾಲೇಜುಗಳು, ತುಮಕೂರು ವಿಶ್ವವಿದ್ಯಾನಿಲಯ ತುಮಕೂರು.
5. ಸಿಸ್ಟಮ್ ಅನಾಲಿಸ್ಟ್, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು-ಈ ಸುತ್ತೋಲೆಯನ್ನು ಸಂಬಂಧಿಸಿದವರಿಗೆ ಕಳುಹಿಸಲು ಸೂಕ್ತ ಕ್ರಮವಹಿಸುವುದು.
6. ಸಂಯೋಜಕರು, ಮಹಿಳಾ ಅಧ್ಯಯನ ಕೇಂದ್ರ, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು- ವಿಶ್ವವಿದ್ಯಾನಿಲಯದಲ್ಲಿ ಕಾನೂನು ಅರಿವು ಕಾರ್ಯಕ್ರಮ ಆಯೋಜಿಸಲು ಸೂಕ್ತ ಕ್ರಮ ಕೈಗೊಳ್ಳುವುದು.

**ಪ್ರತಿಗಳು:**

1. ಮಾನ್ಯ ಕುಲಪತಿಯವರ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
2. ಮಾನ್ಯ ಕುಲಪತಿಗಳ ಆಪ್ತ ಕಾರ್ಯದರ್ಶಿಗಳು, ತುಮಕೂರು ವಿಶ್ವವಿದ್ಯಾನಿಲಯ, ತುಮಕೂರು.
3. ಕಛೇರಿ ಪ್ರತಿ

Government of Karnataka

# ಕರ್ನಾಟಕ ರಾಜ್ಯ ಮಹಿಳಾ ಆಯೋಗ

ಡಾ॥ ನಾಗಲಕ್ಷ್ಮೀ ಚೌಧರಿ, ಬಿ.ಡಿ.ಎಸ್, ಎಂ.ಡಿ.ಎಸ್
ಅಧ್ಯಕ್ಷರು

ಸಂ:ಕರಾಮಆ/ಅಆಶಾ/275 /2025-26 | 44/9 ದಿನಾಂಕ: 28.05.2025

ಇವರಿಗೆ,
ಕಾರ್ಯನಿರ್ವಾಹಕ ನಿರ್ದೇಶಕರು
ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು
ನಂ.30 ಪ್ರಸನ್ನಕುಮಾರ್ ಬ್ಲಾಕ್
ವೈ. ರಾಮಚಂದ್ರ ರಸ್ತೆ, ಗಾಂಧಿನಗರ
ಬೆಂಗಳೂರು - 560009.

Karnataka State Higher Education Council
586
Bangalore.
4/6/25

ಮಾನ್ಯರೆ,

ವಿಷಯ: ಕರ್ನಾಟಕ ರಾಜ್ಯದ ಸರ್ಕಾರಿ ಹಾಗೂ ಖಾಸಗಿ ವಿಶ್ವವಿದ್ಯಾಲಯಗಳು ಹಾಗೂ ಸಂಯೋಜಿತ ಕಾಲೇಜುಗಳಲ್ಲಿ ಕಾನೂನು ಅರಿವು ಕಾರ್ಯಕ್ರಮವನ್ನು ಹಮ್ಮಿಕೊಳ್ಳುವಂತೆ ಕೋರಿ.

***********

ಮೇಲಿನ ವಿಷಯಕ್ಕೆ ಸಂಬಂಧಿಸಿದಂತೆ ಕರ್ನಾಟಕ ರಾಜ್ಯ ಮಹಿಳಾ ಆಯೋಗವು ಕರ್ನಾಟಕದಾದ್ಯಂತ ಮಹಿಳೆಯರ ಸಾಂವಿಧಾನಿಕ ಹಕ್ಕುಗಳನ್ನು ಎತ್ತಿ ಹಿಡಿಯಲು ಮತ್ತು ಅವರ ಕಲ್ಯಾಣವನ್ನು ಮುನ್ನಡೆಸಲು ಶ್ರಮಿಸುತ್ತಿದೆ. ಈ ನಿಟ್ಟಿನಲ್ಲಿ ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ವಿಶ್ವವಿದ್ಯಾಲಯಗಳು ಹಾಗೂ ಅವುಗಳ ಸಂಯೋಜಿತ ಕಾಲೇಜುಗಳಲ್ಲಿ ವಿದ್ಯಾರ್ಥಿನಿಯರು ಹಾಗೂ ಮಹಿಳಾ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಸುರಕ್ಷತೆ ಮತ್ತು ಭದ್ರತೆಯ ಕುರಿತಾಗಿ ಜಾಗೃತಿ ಮೂಡಿಸಲು ಕಾನೂನು ಅರಿವಿನ ಕಾರ್ಯಕ್ರಮವನ್ನು ಕಡ್ಡಾಯವಾಗಿ ಹಮ್ಮಿಕೊಂಡು ವಿದ್ಯಾರ್ಥಿನಿಯರು ಹಾಗೂ ಮಹಿಳಾ ಬೋಧಕರು ಮತ್ತು ಬೋಧಕೇತರ ಸಿಬ್ಬಂದಿಗಳಿಗೆ ಜಾಗೃತಿ ಮೂಡಿಸಲು ಎಲ್ಲಾ ವಿಶ್ವವಿದ್ಯಾಲಯಗಳು ಮತ್ತು ಸಂಯೋಜಿತ ಕಾಲೇಜುಗಳಿಗೆ ಸೂಕ್ತ ನಿರ್ದೇಶನ ನೀಡಬೇಕೆಂದು ತಮ್ಮನ್ನು ಕೋರುತ್ತೇನೆ.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ
Nagalakshmi

A.O
04/06/25
05/06/2025
4/6/2025

#107, 1ನೇ ಮಹಡಿ, ಕರ್ನಾಟಕ ಗೃಹ ಮಂಡಳಿ ಕಟ್ಟಡ, ಕಾವೇರಿ ಭವನ, ಕೆ.ಜಿ.ರಸ್ತೆ,
ಬೆಂಗಳೂರು-560009. ದೂರವಾಣಿ ಕಛೇರಿ : 080-22216486
ವೆಬ್ : www.kscw.karnataka.gov.in ಈ-ಮೇಲ್ : www.kscw.karnataka.gov.in

# ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು


ಸಂ.ಕರಾಉಶಿಪ/ಇತರೆ/02/2025-26 /383 ದಿನಾಂಕ: 05.06.2025

ಗೆ,

1. ಕುಲಸಚಿವರು, ರಾಜ್ಯ ಸಾರ್ವಜನಿಕ ವಿಶ್ವವಿದ್ಯಾಲಯಗಳು
2. ಕುಲಸಚಿವರು, ಖಾಸಗಿ ವಿಶ್ವವಿದ್ಯಾಲಯಗಳು

ಮಾನ್ಯರೇ,

ವಿಷಯ: ರಾಜ್ಯದ ಸರ್ಕಾರಿ ಹಾಗೂ ಖಾಸಗಿ ವಿಶ್ವವಿದ್ಯಾಲಯಗಳು ಮತ್ತು ಘಟಕ ಕಾಲೇಜುಗಳು ಹಾಗೂ ಸಂಯೋಜಿತ ಕಾಲೇಜುಗಳಲ್ಲಿ ಕಾನೂನು ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಕುರಿತು.

ಉಲ್ಲೇಖ: ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷರ ಪತ್ರ ಸಂ ಕರಾಮಆ/ಅಆಶಾ/275/2025-26/44/9 ದಿನಾಂಕ: 28.05.2025

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಮಹಿಳಾ ಆಯೋಗದ ಅಧ್ಯಕ್ಷರು ಬರೆದಿರುವ ಉಲ್ಲೇಖದ ಪತ್ರದಲ್ಲಿ ಮಹಿಳೆಯರ ಸಾಂವಿಧಾನಿಕ ಹಕ್ಕುಗಳನ್ನು ಎತ್ತಿ ಹಿಡಿಯುವ ನಿಟ್ಟಿನಲ್ಲಿ ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಖಾಸಗಿ ವಿಶ್ವವಿದ್ಯಾಲಯಗಳು ಮತ್ತು ಅವುಗಳ ಘಟಕ ಕಾಲೇಜುಗಳು ಹಾಗೂ ಸಂಯೋಜಿತ ಕಾಲೇಜುಗಳಲ್ಲಿ ವಿದ್ಯಾರ್ಥಿನಿಯರು ಹಾಗೂ ಮಹಿಳಾ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಸುರಕ್ಷತೆ ಮತ್ತು ಬದ್ಧತೆಯ ಸಲುವಾಗಿ ಜಾಗೃತಿ ಮೂಡಿಸಲು ಕಾನೂನು ಅರಿವು ಕಾರ್ಯಕ್ರಮವನ್ನು ಕಡ್ಡಾಯವಾಗಿ ಹಮ್ಮಿಕೊಳ್ಳುವಂತೆ ಸೂಚಿಸಿದ್ದು, ಆಯೋಗದ ಅಧ್ಯಕ್ಷರು ಬರೆದಿರುವ ಪತ್ರದ ಪ್ರತಿಯನ್ನು ಇದರೊಂದಿಗೆ ಲಗತ್ತಿಸಿದ್ದು, ಅದು ಸ್ವಯಂವೇದ್ಯವಾಗಿದೆ.

ಈ ಹಿನ್ನೆಲೆಯಲ್ಲಿ, ರಾಜ್ಯದ ಖಾಸಗಿ ವಿಶ್ವವಿದ್ಯಾಲಯಗಳು ಹಾಗೂ ಸರ್ಕಾರಿ ವಿಶ್ವವಿದ್ಯಾಲಯಗಳು ತಮ್ಮ ಅಧೀನದಲ್ಲಿ ಬರುವ ಘಟಕ ಕಾಲೇಜುಗಳು ಹಾಗೂ ಸಂಯೋಜಿತ ಕಾಲೇಜುಗಳಲ್ಲಿ ಕಾನೂನು ಅರಿವು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳುವ ಕುರಿತು ಅಗತ್ಯ ಕ್ರಮಗಳನ್ನು ಕೈಗೊಳ್ಳುವಂತೆ ಈ ಮೂಲಕ ಸೂಚಿಸಲಾಗಿದೆ. ಇದನ್ನು ಅತ್ಯಂತ ತುರ್ತು ಎಂದು ಪರಿಗಣಿಸುವುದು.

ವಂದನೆಗಳೊಂದಿಗೆ,

ತಮ್ಮ ವಿಶ್ವಾಸಿ,

K.G. [signature] 05/06/25

ಕಾರ್ಯನಿರ್ವಾಹಕ ನಿರ್ದೇಶಕರು

ಪ್ರತಿ:

1. ಕುಲಪತಿಗಳ ಆಪ್ತಕಾರ್ಯದರ್ಶಿಗಳು, ರಾಜ್ಯದ ಸಾರ್ವಜನಿಕ ವಿಶ್ವವಿದ್ಯಾಲಯಗಳು ಹಾಗೂ ಖಾಸಗಿ ವಿಶ್ವವಿದ್ಯಾಲಯಗಳು ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ.
2. ಉಪಾಧ್ಯಕ್ಷರ ಆಪ್ತಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತು, ಬೆಂಗಳೂರು.
3. ಕಚೇರಿ ಪ್ರತಿ.

10/6/25


ನಂ. 30, ಪ್ರಸನ್ನಕುಮಾರ ಬ್ಲಾಕ್, ವೈ. ರಾಮಚಂದ್ರ ರಸ್ತೆ, ಗಾಂಧಿನಗರ, ಬೆಂಗಳೂರು - 560 009